ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕರ್ನಾಟಕ ಪಬ್ಲಿಕ್ ಶಾಲೆ ಪ್ರಾರಂಭಿಸುವ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

64 (67) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2020 ರ ಆಯವ್ಯಯದಲ್ಲಿ ಘೋಷಿಸಿರುವಂತೆ ಈಗಾಗಲೇ ಪೂರ್ವ ಪ್ರಾಥಮಿಕ ತರಗತಿಯಿಂದ 12ನೇ ತರಗತಿವರೆಗೆ ಒಂದೇ ಸೂರಿನಡಿ ಶಿಕ್ಷಣ ನೀಡುವ ಸಲುವಾಗಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭ ಮಾಡಿ ಸದರಿ ಶಾಲೆಗಳಿಗೆ ಅಗತ್ಯ ಮೂಲ ಸೌಲಭ್ಯ ಒದಗಿಸಲು 100 ಕೋಟಿ ಅನುದಾನ ಒದಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಗತಿಯ ಕಾರ್ಯ ಯಾವ ಹಂತದಲ್ಲಿದೆ; ಯಾವ ಯಾವ ಶಾಲೆಗಳಿಗೆ ಮೂಲ ಸೌಲಭ್ಯ ಒದಗಿಸಲಾಗಿದೆ; ಒದಗಿಸದಿದ್ದಲ್ಲಿ, ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ; ಸದರಿ ಶಾಲೆಗಳಲ್ಲಿ ಮೂಲ ಸೌಲಭ್ಯ ಒದಗಿಸಲು ಈವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ತಾಲ್ಲೂಕುವಾರು ಪ್ರಗತಿ ವಿವರವನ್ನು ನೀಡುವುದು)